ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿಗಳು

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ    ದಿನಾಂಕ : DATE : 15-2-21



ನ್ಯಾಮತಿ ತಾಲೂಕಿನ ಸೂರಗೊಂಡನಕೊಪ್ಪದಲ್ಲಿ ಸಂತ ಸೇವಾಲಾಲ್ ಜಯಂತಿ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಸಂತ ಸೇವಾಲಾಲ್ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು.

# ಬಂಜಾರ ಭಾಷಾ ಅಕಾಡೆಮಿ ಸ್ಥಾಪನೆಗೆ ಆದೇಶ

15/2/21

ಸಂ.ಕ.ಸಮಾಚಾರ ಹೊನ್ನಾಳಿ

ಬಂಜಾರ ಮತ್ತು ಸಂಸ್ಕೃತಿ ಅಭಿವೃದ್ಧಿಗಾಗಿ ಬಂಜಾರ ಭಾಷಾ ಅಕಾಡೆಮಿ ಸ್ಥಾಪನೆಗೆ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ತಿಳಿಸಿದರು.

ನ್ಯಾಮತಿ ತಾಲೂಕಿನ ಸೂರಗೊಂಡನಕೊಪ್ಪದಲ್ಲಿ ಬಂಜಾರ ಸಮುದಾಯದ ಜಗದ್ಗುರು ಸಂತ ಸೇವಾಲಾಲ್ ಅವರ 282ನೇ ಜಯಂತ್ಯುತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಬಂಜಾರ ಭಾಷೆಯನ್ನು ಉಳಿಸಲು ಹಾಗೂ ಬಂಜಾರ ಭಾಷಾ ಸಂಸ್ಕೃತಿ ಅಭಿವೃದ್ಧಿ ಪಡಿಸಲು ಡಾ.ಹಂ.ಪ ನಾಗರಾಜಯ್ಯ ನೇತೃತ್ವದ ತಜ್ಞರ ಸಮಿತಿ ವರದಿಯಂತೆ 'ಬಂಜಾರ ಭಾಷಾ ಅಕಾಡೆಮಿ' ಸ್ಥಾಪನೆಗೆ ಕ್ರಮ ಕೈಗೊಳ್ಳಲಾಗಿದೆ.

ಕಲ್ಯಾಣ ಕರ್ನಾಟಕದ ಹುಮ್ನಾಬಾದ್ ತಾಲೂಕಿನ ಲಾಲ್‌ಗರಿಯಲ್ಲಿ 34 ಎಕರೆ ಪ್ರದೇಶದಲ್ಲಿ ಸಿದ್ಧ ಉಡುಪು ಘಟಕಕ್ಕೆ ಮಂಜೂರು, ಕೊಪ್ಪಳದ ಬಹುದ್ದೂರು ಬಂಡಿ ಅಭಿವೃದ್ಧಿಗೆ 50 ಕೋಟಿ ರೂ. ಅನುದಾನ ಒದಗಿಸಲಾಗಿದೆ. ಸೂರಗೊಂಡನಕೊಪ್ಪದ ಸಂತ ಸೇವಲಾಲ್ ಪ್ರತಿಷ್ಠಾನದ ಅಭಿವೃದ್ಧಿಗೆ 10 ಕೋಟಿ ರೂ., ಚಿನ್ನಿಕಟ್ಟೆಯಿಂದ ಸೂರಗೊಂಡನಕೊಪ್ಪ ರಸ್ತೆ ಅಭಿವೃದ್ಧಿಗೆ 10 ಕೋಟಿ ರೂ. ಒದಗಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ರಾಜ್ಯದಲ್ಲಿರುವ ತಾಂಡಾಗಳನ್ನು ಕಂದಾಯ ಗ್ರಾಮವಾಗಿಸಲು ಸರ್ಕಾರ ಬದ್ಧವಾಗಿದ್ದು, ಈಗಾಗಲೇ ಕಂದಾಯ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ. ಮುಂದಿನ ವರ್ಷದ ಸಂತ ಸೇವಾಲಾಲ್ ಜಯಂತಿಗೆ ಬರುವುದರೊಳಗೆ ಕಂದಾಯ ಗ್ರಾಮಗಳನ್ನಾಗಿ ಮಾಡಿ ಬರುತ್ತೇನೆ ಎಂದು ಭರವಸೆ ನೀಡಿದರು. ಈ ಸಂದರ್ಭ ಸಮಾಜ ಕಲ್ಯಾಣ ಸಚಿವ ಶ್ರೀರಾಮುಲು, ನಗರಾಭಿವೃದ್ಧಿ ಸಚಿವ ಭೈರತಿ ಬಸವರಾಜ್, ಪಸುಸಂಗೋಪನಾ ಇಲಾಖೆ ಸಚಿವ ಪ್ರಭು ಚೌವ್ಹಾಣ್, ತೋಟಗಾರಿಕೆ ಸಚಿವ ಆರ್.ಶಂಕರ್, ಶಿವಮೊಗ್ಗ ಸಂಸದ ಬಿ.ವೈ. ರಾಘವೇಂದ್ರ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಎಂ.ಪಿ. ರೇಣುಕಾಚಾರ್ಯ, ಮಾಜಿ ಸಚಿವ ರುದ್ರಪ್ಪ ಲಂಬಾಣಿ, ಮಲೆನಾಡು ಅಭಿವೃದ್ಧಿ ಅಧ್ಯಕ್ಷ ಗುರುಮೂರ್ತಿ, ಶಿವಮೊಗ್ಗ ಗ್ರಾಮಾಂತರ ಶಾಸಕ ಅಶೋಕನಾಯ್ಕ ಇದ್ದರು.